ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸರ್ಕಾರಿ ಜಮೀನಿನ ಉದ್ದೇಶಗಳ ಬಗ್ಗೆ

ಡಾ: ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

275 (350) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸರ್ಕಾರಿ ಜಮೀನು ಎಷ್ಟು; ಈ ಜಮೀನನ್ನು ಯಾವ ಉದ್ದೇಶಕ್ಕಾಗಿ ಬಳಸಿಕೊಳ್ಳಲಾಗುತ್ತಿದೆ ; (ವಿವರಗಳನ್ನು ನೀಡುವುದು)

(ಆ) ಸರ್ಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಲು ಕೆಲ ಸರ್ಕಾರಿ ಅಧಿಕಾರಿಗಳು ಪ್ರಯತ್ನಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಅಂತಹ ಪ್ರಕರಣಗಳ ಸಂಪೂರ್ಣ ವಿವರಗಳನ್ನು ನೀಡುವುದು ;

(ಈ) ಇಂತಹ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳನ್ನು ವಜಾ ಮಾಡಲು ವಿಳಂಬವಾಗಲು ಕಾರಣವೇನು ?